**ಕರ್ನಾಟಕ ಸರ್ಕಾರ**

**ಪಂಚಾಯತ್ ರಾಜ್ ಆಯುಕ್ತಾಲಯ**

**ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು – 560 009.**

---

ಸಂಖ್ಯೆ:ಕಪಂರಾಆ/ಅಭಿವೃದ್ಧಿ/566 /2024 ದಿನಾಂಕ: 31.07.2024

Comp. No.: 1477754

**ಸುತ್ತೋಲೆ**

**ವಿಷಯ:** ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ **ಪ್ಯಾರಿಸ್ ನಲ್ಲಿ ನಡೆಯುತ್ತಿರುವ 33ನೇ ಒಲಿಂಪಿಕ್ ಕ್ರೀಡಾಕೂಟದ ಮುಖ್ಯಾಂಶಗಳನ್ನು ಪ್ರದರ್ಶಿಸುವ ಹಾಗೂ ಮಕ್ಕಳಿಗೆ ಆಟೋಟ ಸ್ಪರ್ಧೆಗಳನ್ನು** ಆಯೋಜಿಸುವ ಕುರಿತು.

**ಉಲ್ಲೇಖ:** ಸುತ್ತೋಲೆ ಸಂಖ್ಯೆ:ಕಪಂರಾಆ/ಅಭಿವೃದ್ಧಿ/ಅಂಆದಿ/417/2024 ದಿನಾಂಕ: 03.06.2024

***

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕಳೆದ **ಜೂನ್ 11ರ ಅಂತರ ರಾಷ್ಟ್ರೀಯ ಆಟದ ದಿನದ** ಅಂಗವಾಗಿ ಎಲ್ಲಾ ಮಕ್ಕಳಿಗೆ ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಲು ತಿಳಿಸಲಾಗಿತ್ತು. ಮಕ್ಕಳ ಆಟದ ಹಕ್ಕನ್ನು ಸಾಕಾರಗೊಳಿಸಲು ಅಗತ್ಯ ಚಟುವಟಿಕೆಗಳ ವಿವರಣೆ ನೀಡಲಾಗಿತ್ತು. ಈ ಚಟುವಟಿಕೆಗಳಲ್ಲಿ ಪ್ರತಿ ತಿಂಗಳು ವಿವಿಧ ವಿಷಯಗಳ (ಥೀಮ್) ಆಧಾರದಲ್ಲಿ ವಿವಿಧ ಆಟಗಳನ್ನು ಗುರುತಿಸುವುದು/ ಅಭಿವೃದ್ಧಿಪಡಿಸುವುದು ಹಾಗೂ ಅಂತಹ ಆಟಗಳನ್ನು ಮಕ್ಕಳಿಗೆ ಆಡಿಸುವುದು ಕೂಡಾ ಒಂದಾಗಿರುತ್ತದೆ.

ಈ ನಿಟ್ಟಿನಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈಗಾಗಲೇ ಪ್ಯಾರಿಸ್ ನಲ್ಲಿ ಆರಂಭಗೊಂಡಿರುವ ಜಾಗತಿಕ ಕ್ರೀಡಾ ಹಬ್ಬವಾದ 33ನೇ ಒಲಿಂಪಿಕ್ ಕ್ರೀಡಾಕೂಟದ ಅಂಗವಾಗಿ ಗ್ರಾಮ ಪಂಚಾಯತಿಯ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಲು ಕ್ರಮವಹಿಸುವುದು ಹಾಗೂ ಗ್ರಾಮದ ಮಕ್ಕಳು ಮತ್ತು ಸಾರ್ವಜನಿಕರಲ್ಲಿ ಕ್ರೀಡೆಯ ಬಗ್ಗೆ ಒಲವು ಮೂಡಿಸುವ ಸಲುವಾಗಿ **ಒಲಿಂಪಿಕ್ ಕ್ರೀಡಾಕೂಟದ** ದಿನನಿತ್ಯದ ಮುಖ್ಯಾಂಶಗಳನ್ನು ಅರಿವು ಕೇಂದ್ರಗಳಲ್ಲಿ ಪ್ರತಿ ದಿನ ನಿಗದಿತ ಸಮಯದಲ್ಲಿ ಪ್ರದರ್ಶಿಸಲು ಕ್ರಮವಹಿಸುವುದು.

**(ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್) ರವರಿಂದ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ)**

31/7/24

**ಆಯುಕ್ತರು**

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

3. ರಾಜ್ಯದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ಮಾಹಿತಿ ಕೇಂದ್ರ/ವೆಬ್ಸೈಟ್, ಗ್ರಾಅಪ ಇಲಾಖೆ.
6. ಮಾಹಿತಿ ಕೇಂದ್ರ/ವೆಬ್‌ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

<u>ಪ್ರತಿಯನ್ನು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ರವರ ಆಪ್ತ ಸಹಾಯಕರಿಗೆ.
4. ಕಛೇರಿ ಪ್ರತಿ.